ಕರ್ನಾಟಕ ಸರ್ಕಾರ

# ಹಿಂಬರಹ

ಸಂ: ತಾಂಶಿಇ/40/ಚಿಕಫ/2014-15 1030

ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ,
ಅರಮನೆ ರಸ್ತೆ, ಬೆಂಗಳೂರು-560001,
19 ಜುಲೈ 2017

ಸರ್ಕಾರದ ಆದೇಶ ಸಂ: ಇಡಿ 41 ಯುಆರ್ ಸಿ 2014,ದಿ:10-07-2017 ರಲ್ಲಿ ತಾಂತ್ರಿಕ ಇಲಾಖಾ ವ್ಯಾಪ್ತಿಯಲ್ಲಿರುವ 02 ಸರ್ಕಾರಿ ಕಲಾ ಶಾಲೆಗಳು,23 ಖಾಸಗಿ ಅನುದಾನಿತ ಚಿತ್ರಕಲಾ ಶಾಲೆಗಳು,03 ಅಡ್ ಹಾಕ್ ಅನುದಾನಿತ ಶಾಲೆಗಳು ಹಾಗೂ 49 ಖಾಸಗಿ ಅನುದಾನರಹಿತ ಚಿತ್ರಕಲಾ ಶಾಲೆಗಳು ಒಟ್ಟು 77 ಚಿತ್ರಕಲಾ ಶಾಲೆಗಳ ಪೈಕಿ ಸರ್ಕಾರಿ, ಖಾಸಗಿ ಅನುದಾನಿತ ಹಾಗೂ ಅಡ್ ಹಾಕ್ ಅನುದಾನಿತ ಶಾಲೆಗಳ ಶಿಕ್ಷಕ ಮತ್ತು ಲಿಪಿಕ ಸಿಬ್ಬಂದಿಗಳ ಆಡಳಿತ ಮತ್ತು ಆಯವ್ಯಯ ನಿರ್ವಹಣೆಯನ್ನು ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಿಂದ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಹಸ್ತಾಂತರಿಸಿ ನಿರ್ವಹಿಸುವಂತೆ ಆದೇಶಿಸಲಾಗಿದೆ. ಸದರಿ ಸರ್ಕಾರದ ಆದೇಶವನ್ನು ರಾಜ್ಯದಲ್ಲಿರುವ 02 ಸರ್ಕಾರಿ ಚಿತ್ರಕಲಾ ಶಾಲೆಗಳು,23 ಖಾಸಗಿ ಅನುದಾನಿತ ಚಿತ್ರಕಲಾ ಶಾಲೆಗಳು ,03 ಅಡ್ ಹಾಕ್ ಚಿತ್ರಕಲಾ ಶಾಲೆ/ಮಹಾವಿದ್ಯಾಲಯಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ರವಾನಿಸಲಾಗಿದೆ.

ನಿರ್ದೇಶಕರು

ಪ್ರತಿ:

1. ರಾಜ್ಯದಲ್ಲಿರುವ ಸರ್ಕಾರಿ/ಅನುದಾನಿತ/ ಅಡ್ ಹಾಕ್ ಅನುದಾನಿತ ಚಿತ್ರಕಲಾ ಶಾಲೆ/ ಮಹಾವಿದ್ಯಾಲಯಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
2. ಇ-ಆಡಳಿತ ವಿಭಾಗ,ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ ಬೆಂಗಳೂರು.- ಇಲಾಖೆಯ ವೆಬ್ ಸೈಟ್ ನಲ್ಲಿ ಈ ಕೂಡಲೇ ಪ್ರಕಟಿಸಲು ಸೂಚಿಸಲಾಗಿದೆ.

69704

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಜ್ಯದಲ್ಲಿರುವ ಚಿತ್ರಕಲಾ ಮಹಾವಿದ್ಯಾಲಯಗಳ/ಶಾಲೆಗಳ ಆಯವ್ಯಯ ಮತ್ತು ಆಡಳಿತ ನಿರ್ವಹಣೆಯನ್ನು ಕಾಲೇಜು ಶಿಕ್ಷಣ ಇಲಾಖೆಗೆ ವರ್ಗಾಯಿಸುವ ಬಗ್ಗೆ.

ಓದಲಾಗಿದೆ:-
1) ಸರ್ಕಾರದ ಆದೇಶ ಸಂಖ್ಯೆ:ಇಡಿ 404 ಯುಆರ್ಸಿ 2015, ದಿ: 4-11-2015.
2) ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ:ಡಿಟಿಇ/40/ಚಿಕಘ/ತನಿಖೆ/2014-15/959, ದಿ: 13-10-2016.
3) ಅಧಿಸೂಚನೆ ಸಂಖ್ಯೆ:ಇಡಿ 152 ಯುಆರ್ಸಿ 2015, ದಿ: 16-4-2016 ಮತ್ತು ತಿದ್ದುಪಡಿ ಆದೇಶ ದಿ: 4-7-2016.

---

JD (ENS) / Fm A oh
6763 ... 17/3/2014

ಪ್ರಸ್ತಾವನೆ:-

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಖಾಸಗಿ ಚಿತ್ರಕಲಾ ಕಾಲೇಜುಗಳ ವಾರ್ಷಿಕ ನವೀಕರಣ, ಹೊಸ ಚಿತ್ರಕಲಾ ಕಾಲೇಜುಗಳನ್ನು ಪ್ರಾರಂಭಿಸಲು ಮಂಜೂರಾತಿ; ವಿದ್ಯಾರ್ಥಿಗಳ ಪ್ರವೇಶ ಕುರಿತು, ಶೈಕ್ಷಣಿಕ ಚಟುವಟಿಕೆಗಳ ವಾರ್ಷಿಕ ಕಾರ್ಯಸೂಚಿ, ಪ್ರವೇಶ ಪಡೆದ ವಿದ್ಯಾರ್ಥಿಗಳ ಅನುಮೋದನೆಯನ್ನು ತಾಂತ್ರಿಕ ಶಿಕ್ಷಣ ಇಲಾಖೆಗೆ ನೀಡಿ ಆದೇಶಿಸಲಾಗಿತ್ತು.

ಮೇಲ್ಕಂಡ ಆದೇಶಕ್ಕನುಗುಣವಾಗಿ ಮೇಲೆ ಓದಲಾದ (2)ರ ಪತ್ರದಲ್ಲಿ ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಇವರು ತಾಂತ್ರಿಕ ಶಿಕ್ಷಣ ಇಲಾಖೆಯಡಿಯಲ್ಲಿ ಒಟ್ಟು 195 ಇಂಜಿನಿಯರಿಂಗ್ ಕಾಲೇಜುಗಳು, 291 ಪಾಲಿಟೆಕ್ನಿಕ್ ಕಾಲೇಜುಗಳು, 12 ಕಿರಿಯ ತಾಂತ್ರಿಕ ಶಾಲೆಗಳ ಸಂಪೂರ್ಣ ಶೈಕ್ಷಣಿಕ ಮತ್ತು ಆಡಳಿತ ನಿರ್ವಹಣೆಯನ್ನು ಮಾಡುತ್ತಲಿದ್ದು ಚಿತ್ರಕಲಾ ಘಟಕದಲ್ಲಿ ಕೇವಲ ಒಬ್ಬ ಅಧಿಕಾರಿಯು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದು ಸದರಿ ವಿಷಯಗಳಿಗೆ ಸಂಬಂಧಿಸಿದ ಸೂಕ್ತ ನಿಯಮಾವಳಿಗಳು ತಾಂತ್ರಿಕ ಶಿಕ್ಷಣ ಇಲಾಖೆಯಲ್ಲಿ ಇಲ್ಲದೇ ಇರುವುದರಿಂದ ರಾಜ್ಯದ 77 ಚಿತ್ರಕಲಾ ಶಾಲೆ/ಕಾಲೇಜು/ಮಹಾವಿದ್ಯಾಲಯಗಳ ಶೈಕ್ಷಣಿಕ ಮತ್ತು ಆಡಳಿತ ನಿರ್ವಹಣೆ ಮಾಡಲು ಸಾಧ್ಯವಾಗುವುದಿಲ್ಲ. ಪ್ರಸ್ತುತ ಸರ್ಕಾರದ ಆದೇಶದನ್ವಯ ಖಾಸಗಿ ಚಿತ್ರಕಲಾ ಶಾಲೆಗಳ ವಾರ್ಷಿಕ ನವೀಕರಣ ಹೊಸ ಚಿತ್ರಕಲಾ ಶಾಲೆಗಳನ್ನು ಪ್ರಾರಂಭಿಸಲು ಅನುಮತಿ ವಿದ್ಯಾರ್ಥಿಗಳ ಕುರಿತು ಶೈಕ್ಷಣಿಕ ಚಟುವಟಿಕೆಗಳ ವಾರ್ಷಿಕ ಕಾರ್ಯಸೂಚಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಅನುಮೋದನೆಯನ್ನು ತಾಂತ್ರಿಕ ಶಿಕ್ಷಣ ಇಲಾಖೆಗೆ ನೀಡಿ ಆದೇಶಿಸಲಾಗಿದೆ. ನಿರ್ವಹಣೆಯನ್ನು ಕನ್ನಡ ವಿಶ್ವವಿದ್ಯಾಲಯ ಹಂಪಿಯ ಅಡಿಯಲ್ಲಿ ನಡೆಸಲಾಗುತ್ತಿದೆ. ಸರ್ಕಾರದ ಆದೇಶ ಸಂಖ್ಯೆ:ಇಡಿ 68 ಟಿಪಿಇ 2009 ದಿ:11-05-2010ರನ್ವಯ ಚಿತ್ರಕಲಾ ಮಹಾವಿದ್ಯಾಲಯಗಳು ಮತ್ತು ಚಿತ್ರಕಲಾ ಶಾಲೆಗಳ ವೇತನಾನುದಾನವನ್ನು ಹಾಲಿ ಇರುವ ಲೆಕ್ಕ ಶೀರ್ಷಿಕೆಯಡಿಯಲ್ಲಿ (2203-00-104-0-09-101 ಸಹಾಯಾನುದಾನ) ಹಾಗೂ ವೇತನಾನುದಾನಕ್ಕೆ ಒಳಪಡಿಸುವಾಗ ವಿಧಿಸಿರುವ ಷರತ್ತಿಗನುಗುಣವಾಗಿ ಈ ವೇತನಾನುದಾನವನ್ನು ತಾಂತ್ರಿಕ ಶಿಕ್ಷಣ ಇಲಾಖೆ ಮೂಲಕ ಆಯವ್ಯಯವನ್ನು 2010-11ನೇ ಸಾಲಿನಲ್ಲಿ ಬಿಡುಗಡೆ ಮಾಡಲು ಹಾಗೂ ವೇತನಾನುದಾನಕ್ಕೆ ಸಂಬಂಧಿಸಿದಂತೆ ತಪಾಸಣೆ ಕೈಗೊಳ್ಳಲು ಹಾಗೂ ವೇತನಾನುದಾನಕ್ಕೆ ಒಳಪಡಿಸಲು ಹಾಗೂ ಬೋಧಕ/ಬೋಧಕೇತರ ಸಿಬ್ಬಂದಿ ನೇಮಕಾತಿ ಬಡ್ತಿ ಶಿಸ್ತುಕ್ರಮ ಹುದ್ದೆಗಳ ಸೃಜನೆ/ರದ್ದತಿ ಇತ್ಯಾದಿ ಆಡಳಿತಾತ್ಮಕ ವಿಷಯಗಳ ಬಗ್ಗೆ ತಾಂತ್ರಿಕ ಶಿಕ್ಷಣ ಇಲಾಖೆಯ ಅಡಿಯಲ್ಲಿ (ಸರ್ಕಾರದ ಆದೇಶ ಸಂಖ್ಯೆ:ಇಡಿ 68 ಟಿಪಿಇ 2009 ದಿ/11/05/2010ರನ್ವಯ) ಆದೇಶಗಳನ್ನು ಪಾಲಿಸಲಾಗುತ್ತಿದೆ ಎಂದು ತಿಳಿಸುತ್ತಾ ಆದೇಶದಲ್ಲಿರುವ ಅಂಶಗಳನ್ನು ಇಲಾಖೆಯ ಮೂಲಕ ನಿರ್ವಹಿಸಲು ಸಂಪನ್ಮೂಲದ ಕೊರತೆ ಇರುವುದರಿಂದ ಈ ಹಿಂದಿನಂತೆಯೇ 2016-17ರ ಸಾಲಿಗೆ ಕನ್ನಡ ವಿಶ್ವವಿದ್ಯಾಲಯ ಹಂಪಿ ಇವರು ನಿರ್ವಹಿಸಲು ಅನುಕೂಲವಾಗುವಂತೆ ಸೂಕ್ತ ಆದೇಶವನ್ನು ನೀಡಬೇಕೆಂದು ಸರ್ಕಾರವನ್ನು ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಅದರಂತೆ, ರಾಜ್ಯದಲ್ಲಿನ ಚಿತ್ರಕಲಾ ಮಹಾವಿದ್ಯಾಲಯಗಳ/ಶಾಲೆಗಳ ಆಯವ್ಯಯ ಮತ್ತು ಆಡಳಿತ ನಿರ್ವಹಣೆಯನ್ನು, ಸಧ್ಯ ತಾಂತ್ರಿಕ ಶಿಕ್ಷಣ ಇಲಾಖೆಯು ನಿರ್ವಹಿಸುತ್ತಿದ್ದು ಸದರಿ ಚಿತ್ರಕಲಾ ಮಹಾವಿದ್ಯಾಲಯಗಳ/ಶಾಲೆಗಳ ಆಡಳಿತ ನಿರ್ವಹಣೆಗೆ ವೃಂದ ಮತ್ತು ನೇಮಕಾತಿ ನಿಯಮಗಳು ಸಿಬ್ಬಂದಿ ಮಾದರಿ ಮತ್ತು ಮಾನದಂಡಗಳು ಪಠ್ಯಕ್ರಮಗಳು ಆಡಳಿತ ಮಂಡಳಿಯ ಹಸ್ತಾಂತರದ ಗೊಂದಲಗಳು ಬೋಧಕ ಸಿಬ್ಬಂದಿಗಳ ವಿದ್ಯಾರ್ಹತೆ ಅಗತ್ಯ ಮೂಲಭೂತ ಸೌಕರ್ಯಗಳು ವಿದ್ಯಾರ್ಥಿಗಳ ಪ್ರವೇಶಾತಿ ಇತ್ಯಾದಿಗಳ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಿ ಒಂದು ತಿಂಗಳೊಳಗಾಗಿ ವರದಿ ನೀಡಲು ಮೇಲೆ ಓದಲಾದ (3)ರ ಅಧಿಸೂಚನೆ ಮತ್ತು ತಿದ್ದುಪಡಿಯಲ್ಲಿ ಆಯುಕ್ತರು, ಕಾಲೇಜು ಶಿಕ್ಷಣ, ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ಒಂದು ಸಮಿತಿಯನ್ನು ರಚಿಸಲಾಗಿತ್ತು.

ಸದರಿ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸಿದ್ದು, ಸದರಿ ವರದಿಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿರುವ 02 ಸರ್ಕಾರಿ ಕಲಾ ಶಾಲೆಗಳು 23 ಖಾಸಗಿ ಅನುದಾನಿತ ಚಿತ್ರಕಲಾ ಶಾಲೆಗಳು 03 ಅಡ್‌ಹಾಕ್ ಅನುದಾನಿತ ಶಾಲೆಗಳು ಹಾಗೂ 49 ಖಾಸಗಿ ಅನುದಾನರಹಿತ ಶಾಲೆಗಳು ಒಟ್ಟು 77 ಚಿತ್ರಕಲಾ ಶಾಲೆಗಳ ಪೈಕಿ ಸರ್ಕಾರಿ ಖಾಸಗಿ ಅನುದಾನಿತ ಹಾಗೂ ಅಡ್‌ಹಾಕ್ ಅನುದಾನಿತ ಶಾಲೆಗಳ ಶಿಕ್ಷಕ ಮತ್ತು ಲಿಪಿಕ ಸಿಬ್ಬಂದಿಗಳ ಆಡಳಿತ ಮತ್ತು ಆಯವ್ಯಯ ನಿರ್ವಹಣೆಯನ್ನು ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಿಂದ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಹಸ್ತಾಂತರಿಸಿಕೊಂಡು ಶೈಕ್ಷಣಿಕ ಕಾರ್ಯಚಟುವಟಿಕೆಗಳನ್ನು ಸಂಬಂಧಪಟ್ಟ ವಿಶ್ವವಿದ್ಯಾಲಯಗಳು (ಬೆಂಗಳೂರು ವಿಶ್ವವಿದ್ಯಾಲಯ, ತುಮಕೂರು ವಿಶ್ವವಿದ್ಯಾಲಯ, ಕರ್ನಾಟಕ ವಿಶ್ವವಿದ್ಯಾಲಯ, ಗುಲಬರ್ಗ ವಿಶ್ವವಿದ್ಯಾಲಯ, ಕನ್ನಡ ವಿಶ್ವವಿದ್ಯಾಲಯ) ನಿರ್ವಹಿಸಲು ಶಿಫಾರಸ್ಸು ಮಾಡಿರುತ್ತದೆ.

ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 41 ಯುಆರ್‌ಸಿ 2014, ಬೆಂಗಳೂರು, ದಿನಾಂಕ 10-7-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿರುವ 02 ಸರ್ಕಾರಿ ಕಲಾ ಶಾಲೆಗಳು 23 ಖಾಸಗಿ ಅನುದಾನಿತ ಚಿತ್ರಕಲಾ ಶಾಲೆಗಳು 03 ಅಡ್‌ಹಾಕ್ ಅನುದಾನಿತ ಶಾಲೆಗಳು ಹಾಗೂ 49 ಖಾಸಗಿ ಅನುದಾನರಹಿತ ಶಾಲೆಗಳು ಒಟ್ಟು 77 ಚಿತ್ರಕಲಾ ಶಾಲೆಗಳ ಪೈಕಿ ಸರ್ಕಾರಿ ಖಾಸಗಿ ಅನುದಾನಿತ ಹಾಗೂ ಅಡ್‌ಹಾಕ್ ಅನುದಾನಿತ ಶಾಲೆಗಳ ಶಿಕ್ಷಕ ಮತ್ತು ಲಿಪಿಕ ಸಿಬ್ಬಂದಿಗಳ ಆಡಳಿತ ಮತ್ತು ಆಯವ್ಯಯ ನಿರ್ವಹಣೆಯನ್ನು ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯಿಂದ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಹಸ್ತಾಂತರಿಸಿಕೊಂಡು, ಶೈಕ್ಷಣಿಕ ಕಾರ್ಯಚಟುವಟಿಕೆಗಳನ್ನು ಸಂಬಂಧಪಟ್ಟ ವಿಶ್ವವಿದ್ಯಾಲಯಗಳು (ಬೆಂಗಳೂರು ವಿಶ್ವವಿದ್ಯಾಲಯ, ತುಮಕೂರು ವಿಶ್ವವಿದ್ಯಾಲಯ, ಕರ್ನಾಟಕ ವಿಶ್ವವಿದ್ಯಾಲಯ, ಗುಲಬರ್ಗ ವಿಶ್ವವಿದ್ಯಾಲಯ, ಕನ್ನಡ ವಿಶ್ವವಿದ್ಯಾಲಯ) ನಿರ್ವಹಿಸುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ.ಎ.ಅಹಮದ್ ಜಾನ್ )
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2)

ಇವರಿಗೆ:-

1. ಮಹಾಲೇಖಪಾಲರು, (ಲೆಕ್ಕಪತ್ರ/ಆಡಿಟ್), ಕರ್ನಾಟಕ, ಬೆಂಗಳೂರು-560 001.
2. ಸನ್ಮಾನ್ಯ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಕುಲಪತಿಗಳು/ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು/ ತುಮಕೂರು ವಿಶ್ವವಿದ್ಯಾಲಯ, ತುಮಕೂರು/ ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ/ ಗುಲಬರ್ಗ ವಿಶ್ವವಿದ್ಯಾಲಯ, ಕಲಬುರಗಿ/ ಕನ್ನಡ ವಿಶ್ವವಿದ್ಯಾಲಯ, ಹಂಪಿ.
5. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ಆಂತರಿಕ ಆರ್ಥಿಕ ಸಲಹೆಗಾರರು, ಶಿಕ್ಷಣ ಇಲಾಖೆ.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-7/8, ವಿಧಾನಸೌಧ.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ,
10. ಸರ್ಕಾರದ ಉಪಕಾರ್ಯದರ್ಶಿಯವರ ಆಪ್ತ ಸಹಾಯಕರು, ವಿಶ್ವವಿದ್ಯಾಲಯಗಳು ಶಾಖೆ.
11. ರಕ್ಷಾ ಕಡತ/ಹೆಚ್ಚುವರಿ ಪ್ರತಿ.

---

Scanned by CamScanner